# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ಗುರುತಿನ ಪ್ರಶ್ನೆ**

ದಿನಾಂಕ : 23-03-2021 ಪ್ರಶ್ನೆ ಸಂಖ್ಯೆ : 267(1925)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ರಘುನಾಥ್ ರಾವ್ ಮಲ್ಕಾಪೂರೆ(ವಿಧಾನಸಭೆಯಿಂದ ಚುನಾಯಿತರಾದವರು )

ಉತ್ತರ ನೀಡಬೇಕಾದ ದಿನಾಂಕ : 23-03-2021

ಉತ್ತರಿಸುವ ಸಚಿವರು: ಪೌರಾಡಳಿತ ಹಾಗೂ ಸಕ್ಕರೆ ಸಚಿವರು

ವಿಷಯ : ಕಸ ವಿಲೇವಾರಿ ಘಟಕದಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ

(ಅ) ಬೀದರ್ ತಾಲ್ಲೂಕಿನ ಹೊರ ವಲಯದಲ್ಲಿ ಕಸ ವಿಲೇವಾರಿ ಘಟಕವನ್ನು ಯಾವಾಗ ಸ್ಥಾಪಿಸಲಾಯಿತು; ಭೂ ಭರ್ತಿ ನಿವೇಶನ (Land file site) ಇದಕ್ಕೆ ತಗುಲಿದ ವೆಚ್ಚವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಈ ಘಟಕದ ಯಂತ್ರೋಪಕರಣಗಳು ಎಲ್ಲಿ ಯಾವಾಗ ಯಾವ ಏಜೆನ್ಸಿ ಮೂಲಕ ಯಾವ ಕಂಪನಿಯದಾಗಿವೆ; ಹಾಗೂ ಈ ಯಂತ್ರವನ್ನು ಟೆಂಡರ್ ಮೂಲಕ ಖರೀದಿಸಲಾಗಿದೆಯೇ; ಟೆಂಡರ್ ಕರೆದಿದ್ದಲ್ಲಿ, ಟೆಂಡರ್ ಪ್ರಕ್ರಿಯೆಯ ಪ್ರತಿಯೊಂದಿಗೆ ಸ್ಪಷ್ಟ ವಿವರ ನೀಡುವುದು;

(ಇ) ಈ ಘಟಕದಿಂದ ಸುತ್ತಮುತ್ತಲಿನಲ್ಲಿ ಬರುವ ಗ್ರಾಮದ ಗ್ರಾಮಸ್ಥರಿಗೆ ಹಾಗೂ ಸಾರ್ವಜನಿಕರಿಗೆ ದುರ್ವಾಸನೆಯಿಂದ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ನಿಯಂತ್ರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಘಟಕದಿಂದ ಇಲ್ಲಿಯವರೆಗೆ ಎಷ್ಟು ಪ್ರಮಾಣದಲ್ಲಿ 'ಗೊಬ್ಬರ' ತಯಾರಿಸಲಾಗಿದೆ ಹಾಗೂ ಮಾರಾಟದಿಂದ ಸರ್ಕಾರಕ್ಕೆ ಬಂದಿರುವ ಆದಾಯವೆಷ್ಟು? (ವರ್ಷವಾರು ಮಾಹಿತಿ ನೀಡುವುದು)